# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಸಿ.ಓ.ನಂದೀಶ್, ಕಾರ್ಯಪಾಲಕ ಇಂಜಿನಿಯರ್, ಯೋಜನಾ ವಿಭಾಗ (ಪಿ.ಎಂ.ಜಿ.ಎಸ್.ವೈ), ಚಿಕ್ಕಮಗಳೂರು ಇವರನ್ನು ಅಮಾನತ್ತುಪಡಿಸುವ ಬಗ್ಗೆ.

ಓದಲಾಗಿದೆ:-

1) ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಕೆ.ಆರ್.ಆರ್.ಡಿ.ಎ./ಎಡಿಎಂ.01/ 2012 /5450, ದಿನಾಂಕ:18.01.2012.

2) ಅಪರ ಪೋಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ:ಲೋಕ್ /ಐಎನ್‌ವಿ(ಜಿ)/ಎಂ-/ಸಿಆರ್2/ 2012, ಚಿಕ್ಕಮಗಳೂರು, ದಿನಾಂಕ : 27.01.2012.

ಪ್ರಸ್ತಾವನೆ :-

ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂ ಇವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 18-01-2012ರ ಪತ್ರದಲ್ಲಿ ಶ್ರೀ ಸಿ.ಓ.ನಂದೀಶ್, ಕಾರ್ಯಪಾಲಕ ಇಂಜಿನಿಯರ್, ಯೋಜನಾ ವಿಭಾಗ, (ಪಿ.ಎಂ.ಜಿ.ಎಸ್.ವೈ), ಚಿಕ್ಕಮಗಳೂರು ಇವರನ್ನು ದಿನಾಂಕ:13.01.2012ರಂದು ಲೋಕಾಯುಕ್ತ ಪೋಲೀಸರು ಟ್ರ್ಯಾಪ್ ಮಾಡಿರುವುದರಿಂದ ಈ ಅಧಿಕಾರಿಯನ್ನು ಪ್ರಿನ್ಸಿಪಲ್ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವು ದಿನಾಂಕ:13.01.2012ರ ಆದೇಶದಲ್ಲಿ ನ್ಯಾಯಿಕ ಅಭಿರಕ್ಷೆಯಲ್ಲಿಡಲು (Judicial Custody) ಆದೇಶಿಸಿ, ನಂತರ ದಿನಾಂಕ:16.01.2012ರಂದು ಜಾಮೀನು ಮೇಲೆ ಬಿಡುಗಡೆ ಮಾಡಿರುವುದನ್ನು ಸರ್ಕಾರಕ್ಕೆ ವರದಿ ಮಾಡಿರುತ್ತಾರೆ.

ಅಪರ ಪೋಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ:27.01.2012ರ ಪತ್ರದಲ್ಲಿ ಶ್ರೀ ಸಿ.ಓ. ನಂದೀಶ್, ಇವರು ದೇವನೂರು ಹೊನ್ನೇನಹಳ್ಳಿ ಮತ್ತು ವಡೇರಹಳ್ಳಿ ರಸ್ತೆಗಳ ಕಾಮಗಾರಿ ಬಾಬ್ತು ಬಿಲ್ಲುಗಳ ತಯಾರಿಕೆಗೆ ರೂ.3.00ಲಕ್ಷ ಅಕ್ರಮ ಸಂಭಾವನೆಗೆ ಒತ್ತಾಯಿಸಿ, ರೂ.1.00ಲಕ್ಷಗಳನ್ನು ಪಡೆಯುತ್ತಿದ್ದಾಗ, ದಿನಾಂಕ:13.01.2011ರಂದು ಲೋಕಾಯುಕ್ತ ಪೋಲೀಸರಿಗೆ ಸಿಕ್ಕಿಬಿದ್ದಿರುತ್ತಾರೆ. ಆದ್ದರಿಂದ ಈ ಅಧಿಕಾರಿಯನ್ನು ಬಂಧಿಸಿ, ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದ್ದು, ನಂತರ ದಿನಾಂಕ:16.01.2012ರಂದು ಜಾಮೀನು ಮೇಲೆ ಬಿಡುಗಡೆ ಹೊಂದಿರುತ್ತಾರೆ. ಈ ಅಧಿಕಾರಿಯನ್ನು ಅದೇ ಹುದ್ದೆಯಲ್ಲಿ ಮುಂದುವರಿಸಿದಲ್ಲಿ ತನಿಖೆಗೆ ಅಡ್ಡಿ ಉಂಟು ಮಾಡುವ / ಹಸ್ತಕ್ಷೇಪ ಮಾಡುವ ಹಾಗೂ ಸಾಕ್ಷಿ ಪುರಾವೆಗಳನ್ನು ನಾಶ ಪಡಿಸುವ ಸಂಭವವಿರುವುದರಿಂದ, ಈ ಅಧಿಕಾರಿಯನ್ನು ಸೇವೆಯಿಂದ ಅಮಾನತ್ತುಪಡಿಸಲು ಕೋರಿರುತ್ತಾರೆ.

.. 2 ..

ಆದ್ದರಿಂದ ಪ್ರಕರಣದ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಶ್ರೀ ಸಿ. ಓ.ನಂದೀಶ್, ಕಾರ್ಯಪಾಲಕ ಇಂಜಿನಿಯರ್ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸಲು ನಿರ್ಧರಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 4 ಇಎನ್‌ಕ್ಯೂ 2012,**
**ಬೆಂಗಳೂರು, ದಿನಾಂಕ: 08-02-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮತ್ತು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 10 (2) (ಎ) ರ ಪ್ರಕಾರ ಶ್ರೀ ಸಿ. ಓ. ನಂದೀಶ್, ಕಾರ್ಯಪಾಲಕ ಇಂಜಿನಿಯರ್, ಇವರು ರೂ.1.00ಲಕ್ಷ ಅಕ್ರಮ ಸಂಭಾವನೆ ಪಡೆಯುತ್ತಿದ್ದ ಸಂದರ್ಭದಲ್ಲಿ ಲೋಕಾಯುಕ್ತ ಪೋಲೀಸರಿಗೆ ಸಿಕ್ಕಿಬಿದ್ದಿದ್ದು, ದಿನಾಂಕ:13-01-2012 ರಿಂದ 16-01-2012ರವರೆಗೆ ನ್ಯಾಯಾಂಗ ಬಂಧನದಲ್ಲಿರಿಸಿದ್ದರಿಂದ ದಿನಾಂಕ:13.01.2012ರಿಂದಲೇ ಜಾರಿಗೆ ಬರುವಂತೆ ಸದರಿಯವರನ್ನು ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿದೆ.

ಈ ಅಧಿಕಾರಿಯ ಲೀನ್‌ನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇಲ್ಲಿಗೆ ವರ್ಗಾಯಿಸಲಾಗಿದೆ.

ಈ ಅಧಿಕಾರಿಯು ಅಮಾನತ್ತು ಅವಧಿಯಲ್ಲಿ ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಪಡೆಯದೇ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

ಈ ಅಧಿಕಾರಿಯು ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 98ರ ಅನುಸಾರ ಜೀವನಾಧಾರ ಭತ್ಯೆ ಪಡೆಯಲು ಅರ್ಹರಾಗಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

8/2/12
(ಎನ್. ವೈ. ಸಾಗರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, (ಲೆಕ್ಕಪತ್ರ 1 ಮತ್ತು 2 ) / (ಆಡಿಟ್ ), ಕರ್ನಾಟಕ, ಬೆಂಗಳೂರು.
2. ಅಪರ ಆರಕ್ಷಕ ಮಹಾ ನಿರ್ದೇಶಕರು, ಪೋಲೀಸ್ ವಿಭಾಗ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ,
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜ್‌ಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
6. ಮುಖ್ಯ ಇಂಜಿನೀಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್. ಸರ್ಕಲ್‌ರ್, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು.
8. ಶ್ರೀ ಸಿ.ಓ. ನಂದೀಶ್, ಕಾರ್ಯಪಾಲಕ ಇಂಜಿನಿಯರ್, ಯೋಜನಾ ವಿಭಾಗ, (ಪಿ.ಎಂ.ಜಿ.ಎಸ್.ವೈ), ಚಿಕ್ಕಮಗಳೂರು.
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ(ಸೇವೆಗಳು–ಬಿ) / (ಸೇವೆಗಳು–ಸಿ)
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾ) / ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
12. ಶಾಖಾ ರಕ್ಷಾ ಕಡತ / ಮಾಹಿತಿ ಕೇಂದ್ರ/ ಕಂಪ್ಯೂಟರ್ ಸೆಲ್ / ಹೆಚ್ಚುವರಿ ಪ್ರತಿಗಳು.